ಓ.ಎಸ್. 299/2016
ಡಿ.ಡಬ್ಲ್ಯೂ-1

ದಿನಾಂಕಃ **14.10.2025**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀ ಸವಾಲುಃ ವಾದಿ ಪರ ಶ್ರೀ ಎಂ.ಎನ್.ಜಿ. ವಕೀಲರಿಂದಃ

ನನ್ನ ತವರು ಮನೆ ಕಡಗತ್ತೂರು. ನನ್ನ ಮದುವೆಯಾಗುವವರೆವಿಗೂ ಕಡಗತ್ತೂರು ಗ್ರಾಮದಲ್ಲಿ ವಾಸವಾಗಿದ್ದೆನು. ವಾದಿಗಳು, 1, 2 ಮತ್ತು 9 ನೇ ಪ್ರತಿವಾದಿಗಳು ಕಡಗತ್ತೂರು ಗ್ರಾಮದ ನಿವಾಸಿಗಳು ಎಂದರೆ ಸರಿ. ವಾದಿಗಳು 1 ನೇ ಪ್ರತಿವಾದಿಗಳ ಮಕ್ಕಳು ಎಂದರೆ ಸರಿ. ವಾದಿಯ ಕುಟುಂಬದ ಎಲ್ಲಾ ಸದಸ್ಯರ ಬಗ್ಗೆ ನನಗೆ ಮಾಹಿತಿ ಇರುತ್ತದೆ ಎಂದು ಸೂಚಿಸುವುದು ಸರಿಯಲ್ಲ. ಈ ಪ್ರಕರಣದಲ್ಲಿ ನನ್ನ ಪ್ರತಿವಾದ ಪತ್ರವನ್ನು ತಯಾರಿಸಲು ನಾನೇ ಮಾಹಿತಿ ನೀಡಿರುತ್ತೇನೆ. 1 ನೇ ಪ್ರತಿವಾದಿಗೆ ಅಕ್ಕ-ತಂಗಿಯರು ಇರುತ್ತಾರೆಂದು ನಾನು ನಮ್ಮ ವಕೀಲರಿಗೆ ಮಾಹಿತಿ ನೀಡಿರುವುದಿಲ್ಲ. 1 ನೇ ಪ್ರತಿವಾದಿಗೆ ಅಕ್ಕ-ತಂಗಿಯರು ಇರುತ್ತಾರೋ ಇಲ್ಲವೋ ನನಗೆ ಗೊತ್ತಿರುವುದಿಲ್ಲ.

**2.** 1, 2 ಮತ್ತು 9 ನೇ ಪ್ರತಿವಾದಿಗಳು ದಾವಾ ಸ್ವತ್ತುಗಳನ್ನು ಹೊರತು ಪಡಿಸಿ ಬೇರೆ ಆಸ್ತಿಗಳನ್ನು ಖರೀದಿ ಮಾಡಿದ ಬಗ್ಗೆ ನನಗೆ ಗೊತ್ತಿರುವುದಿಲ್ಲ. ವಾದಿಗಳ ವಿದ್ಯಾಭ್ಯಾಸದ ಬಗ್ಗೆ ನನಗೆ ಗೊತ್ತಿರುವುದಿಲ್ಲ. ಕಡಗತ್ತೂರು ಗ್ರಾಮದಲ್ಲಿ 10 ನೇ ತರಗತಿಯವರೆಗೆ ವ್ಯಾಸಂಗ ಮಾಡಲು ಸರ್ಕಾರಿ ಶಾಲೆ ಇರುತ್ತದೆ ಎಂದರೆ ಸರಿ. ವಾದಿಗಳು ಕಡಗತ್ತೂರು ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿರುತ್ತಾರೆಂದರೆ ನನಗೆ ಗೊತ್ತಿರುವುದಿಲ್ಲ.

**3.** ದಾವಾ 2 ನೇ ಆಸ್ತಿಯಲ್ಲಿ ಖರೀದಿ ಮಾಡುವ ಪೂರ್ವದಲ್ಲಿ ನಾನು ಸದರಿ ಸ್ವತ್ತು ಮೂಲತಃ ಯಾರಿಗೆ ಸೇರಿತ್ತು ಎಂದು ತಿಳಿದುಕೊಂಡಿರುತ್ತೇನೆ. ಸದರಿ ಸ್ವತ್ತು ಮೂಲತಃ 1, 2 ಮತ್ತು 9 ನೇ ಪ್ರತಿವಾದಿಗಳಿಗೆ ಸೇರಿತ್ತು ಎಂದು ನನಗೆ ಗೊತ್ತಾಗಿರುತ್ತದೆ. ದಾವಾ 2 ನೇ ಸ್ವತ್ತನ್ನು ಖರೀದಿ ಮಾಡುವ ಕಾಲಕ್ಕೆ 1 ನೇ ಪ್ರತಿವಾದಿಗೆ ಮಕ್ಕಳಿರುವ ಬಗ್ಗೆ ನನಗೆ ಗೊತ್ತಿರುವುದಿಲ್ಲ. ವಾದಿಗಳು ಈ ದಾವೆಯನ್ನು ಯಾವ ಪರಿಹಾರಕ್ಕಾಗಿ ಹೂಡಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ. ನಾನು ದಾವಾ 2 ನೇ ಆಸ್ತಿಯನ್ನು ಖರೀದಿ ಮಾಡುವ ಕಾಲಕ್ಕೆ ಸದರಿ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದಾದರೂ ನ್ಯಾಯಾಲಯದಲ್ಲಿ ದಾವೆ ಇರುತ್ತದೆಯೇ ಎಂಬ ಬಗ್ಗೆ ಮಾಹಿತಿ ಪಡೆದುಕೊಂಡಿರುವುದಿಲ್ಲ. ನಾನು ದಾವಾ 2 ನೇ ಆಸ್ತಿಯನ್ನು ಖರೀದಿ ಮಾಡುವ ದಿನದಂದು ಈ ದಾವೆ ಚಾಲ್ತಿಯಲ್ಲಿತ್ತು ಎಂದರೆ ಸರಿ.

**4.** ದಾವಾ 2 ನೇ ಸ್ವತ್ತಿನಲ್ಲಿ 1 ಎಕರೆ 11 ಗುಂಟೆ ಜಮೀನನ್ನು ನಾನು ನನ್ನ ಗಂಡನಿಗೆ ದಾನ ಮಾಡಿಕೊಟ್ಟ ಬಗ್ಗೆ ನನ್ನ ಪ್ರತಿವಾದ ಪತ್ರದಲ್ಲಿ ನಮೂದು ಮಾಡಿಸಿರುವುದಿಲ್ಲ ಎಂದರೆ ಸರಿ. ದಾವಾ 2 ನೇ ಸ್ವತ್ತಿನಲ್ಲಿ ವಾದಿಗಳಿಗೆ ಪಾಲು ಇರುತ್ತದೆ ಎಂದು ಸೂಚಿಸುವುದು ಸರಿಯಲ್ಲ. ದಾವಾ 2 ನೇ ಸ್ವತ್ತು ವಾದಿಗಳ ಒಟ್ಟು ಕುಟುಂಬದ ಆಸ್ತಿ ಎಂದು ಗೊತ್ತಿದ್ದರೂ ಸಹ ವಾದಿಗಳಿಗೆ ಮೋಸ ಮಾಡುವ ಉದ್ದೇಶದಿಂದ ಕ್ರಯ ಪತ್ರ ಮಾಡಿಸಿಕೊಂಡಿರುತ್ತೇನೆ ಎಂದು ಸೂಚಿಸುವುದು ಸರಿಯಲ್ಲ.

**5.** ವಾದಿಗಳು ಮತ್ತು ವಾದಿಗಳ ಕುಟುಂಬದ ಬಗ್ಗೆ ನನಗೆ ಎಲ್ಲಾ ಮಾಹಿತಿ ಇದ್ದರೂ ಸಹ ದಾವಾ 2 ನೇ ಆಸ್ತಿಯನ್ನು ಅಕ್ರಮವಾಗಿ ಪಡೆದುಕೊಳ್ಳುವ ಉದ್ದೇಶದಿಂದ ಸುಳ್ಳು ಪ್ರಮಾಣ

ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ದಾವಾ 2 ನೇ ಆಸ್ತಿಯನ್ನು 1, 2 ಮತ್ತು 9 ನೇ ಪ್ರತಿವಾದಿಗಳು ಕುಟುಂಬದ ಅವಶ್ಯಕತೆಗಾಗಿ ಮತ್ತು ಅಭಿವೃದ್ಧಿಗಾಗಿ ಮಾರಾಟ ಮಾಡಿರುವುದಿಲ್ಲ ಎಂದು ಸೂಚಿಸುವುದು ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ